# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 283 |
| 2) | ಮಾನ್ಯ ಸದಸ್ಯರ ಹೆಸರು | ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 06/07/2023 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

************

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ಇರುವ ಪದವೀಧರ ನಿರುದ್ಯೋಗಿಗಳ ಒಟ್ಟು ಸಂಖ್ಯೆ ಎಷ್ಟು; ನಿರುದ್ಯೋಗಿ ಪದವೀಧರರಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಿದೆ: | ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ನೊಂದಾಯಿಸಿಕೊಂಡಿರುವ ಪ್ರಕಾರ ಪ್ರಸ್ತುತ ನಿರುದ್ಯೋಗಿ ಪದವೀಧರರ ಸಂಖ್ಯೆ: 39,654. (ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಹೆಸರು ನೋಂದಾಯಿಸಿಕೊಳ್ಳುವುದು "ಕಡ್ಡಾಯವಲ್ಲದ" ಕಾರಣ ಸದರಿ ಅಂಕಿ ಅಂಶಗಳು ಹೆಸರು ನೋಂದಾಯಿಸಿಕೊಂಡಂತಹ ಅಭ್ಯರ್ಥಿಗಳಿಗೆ ಮಾತ್ರ ಸೀಮಿತವಾಗಿರುತ್ತದೆ).<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ಹಾಗೂ ಉದ್ಯೋಗ ಕಲ್ಪಿಸಿಕೊಳ್ಳಲು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ.<br><br>1. ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಗಳ ಮೂಲಕ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ರಾಜ್ಯದ ಯುವ ಜನತೆಗೆ ಕೌಶಲ್ಯತೆಯೊಂದಿಗೆ ಉದ್ಯಮಶೀಲರನ್ನಾಗಿಸುವ ಮಹತ್ವಕಾಂಕ್ಷೆಯನ್ನು ಹೊಂದಲಾಗಿದೆ ಹಾಗೂ ಪ್ರಾದೇಶಿಕ, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉದ್ಯೋಗ ಮೇಳಗಳ ಮೂಲಕ ಮತ್ತು ವರ್ಚುಯಲ್ ಉದ್ಯೋಗ ಮೇಳಗಳ ಮೂಲಕ ರಾಜ್ಯದ ಯುವ ಜನತೆಗೆ ಉದ್ಯೋಗಾವಕಾಶ ಒದಗಿಸಲು ಕ್ರಮವಹಿಸಲಾಗಿದೆ.<br><br>2. ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಡೇ-ಎನ್‌ಯುಎಲ್‌ಎಂ ಅಭಿಯಾನದಡಿ ನಗರದ ಬಡವರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ವಿಕಲಾಂಗರು, ಅಲ್ಪಸಂಖ್ಯಾತರು ಮತ್ತು ಮಹಿಳೆಯರಿಗೆ ಈ ಕೆಳಕಂಡ ಉಪಘಟಕವಾರು ನೆರವುಗಳನ್ನು ನೀಡಲು ಕ್ರಮಕೈಗೊಳ್ಳಲಾಗಿದೆ.<br><br>• **ಸ್ವಯಂ ಉದ್ಯೋಗ ಕಾರ್ಯಕ್ರಮ:-** ಈ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು ಹಾಗೂ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುವುದು. |

--2

- **ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ:** ಈ ಉಪಘಟಕದಡಿ ನಗರದ ನಿರುದ್ಯೋಗ ಯುವಕ / ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಿ, ಪ್ರಮಾಣೀಕರಣ ಮತ್ತು ಮೌಲ್ಯಮಾಪನವನ್ನು ಕೈಗೊಂಡು, ಕೇಂದ್ರ ಸರ್ಕಾರದ ಪ್ರಮಾಣ ಪತ್ರವನ್ನು ನೀಡಿ, ತರಬೇತಿಯನ್ನು ಪಡೆದುಕೊಂಡ ಶೇ.70 ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು.
- **ನಗರದ ಬೀದಿ ವ್ಯಾಪಾರಸ್ಥರಿಗೆ ಬೆಂಬಲ:** ಈ ಉಪಘಟಕದಡಿ ನಗರದ ಬೀದಿ ವ್ಯಾಪಾರಸ್ಥರನ್ನು ಗುರುತಿಸಿ, ಗುರುತಿನ ಚೀಟಿ ಮತ್ತು ಮಾರಾಟ ಪ್ರಮಾಣ ಪತ್ರವನ್ನು ವಿತರಿಸಲಾಗುವುದು. ಪಿಎಂ ಸ್ವ-ನಿಧಿ ಯೋಜನೆಯಡಿ ಬೀದಿ ವ್ಯಾಪಾರಿಗಳಿಗೆ ಪ್ರಾಥಮಿಕ ಹಂತದಲ್ಲಿ ರೂ.10,000/- ತದನಂತರ ನಿಯಮಿತವಾಗಿ ಸಾಲ ಮರುಪಾವತಿ ಆಧಾರದ ಮೇಲೆ ರೂ.20,000/- ಮತ್ತು ರೂ.50,000/-ಗಳ ವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಒದಗಿಸಲಾಗುವುದು. ಸದರಿ ಸಾಲದ ಮೊತ್ತಕ್ಕೆ ಶೇ.7 ರವರೆಗೆ ತಗಲುವ ಬಡ್ಡಿ ಸಹಾಯಧನವನ್ನು ಕೇಂದ್ರ ಸರ್ಕಾರವು ಭರಿಸಿ ಪಾವತಿಸುತ್ತದೆ.
- **ನಗರದ ವಸತಿ ರಹಿತರಿಗೆ ಆಶ್ರಯ:** – ಈ ಉಪಘಟಕದಡಿ ನಗರದ ವಸತಿ ರಹಿತರನ್ನು ರ್‍ಯಾಪಿಡ್ ಸಮೀಕ್ಷೆಯ ಮೂಲಕ ಗುರುತಿಸಿ, ಆಶ್ರಯವನ್ನು ಕಲ್ಪಿಸಲಾಗುವುದು ಹಾಗೂ ಹೊಸ ಆಶ್ರಯ ನಿರ್ಮಾಣ, ಆಶ್ರಯ ನವೀಕರಣಕ್ಕೆ ಬೆಂಬಲವನ್ನು ನೀಡಲಾಗುವುದು.

3. ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್‌ಆರ್‌ಎಲ್‌ಎಂ) ಯೋಜನೆಯಡಿ ಗ್ರಾಮೀಣ ಪ್ರದೇಶದ ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರಿಗೆ ಎನ್‌ಆರ್‌ಎಲ್‌ಎಂ ಯೋಜನೆಯ ಸೌಲಭ್ಯಗಳು, ಹಣಕಾಸು ನಿರ್ವಹಣೆ, ಉಳಿತಾಯದ ದಶಸೂತ್ರಗಳು, ಕಿರು ಉದ್ದಿಮೆ, ಪಿಎಂಎಫ್‌ಎಂಇ, ಮುಂತಾದ ವಿಷಯಗಳನ್ನು ತರಬೇತಿ ನೀಡಿ, ಸ್ವ-ಉದ್ಯೋಗ ಕಲ್ಪಿಸಿಕೊಡಲು ಒಗ್ಗೂಡಿಸುವ ಮೂಲಕ ಇತರೆ ಇಲಾಖೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಉತ್ತೇಜಿಸಲಾಗುತ್ತಿದೆ.
4. ದೀನ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ (ಡಿಡಿಯುಜಿಕೆವೈ) ಮೆ॥ ಶಾಹಿ ಎಕ್ಸ್‌ಪೋರ್ಟ್ ಪ್ರೈವೇಟ್ ಲಿಮಿಟೆಡ್ ಬೆಂಗಳೂರು, ಬಸವಕಲ್ಯಾಣ ತಾಲೂಕಿನಲ್ಲಿ ನಿರುದ್ಯೋಗ ಮಹಿಳೆಯರಿಗೆ ಟೇಲರಿಂಗ್ ತರಬೇತಿ ನೀಡಿ ಉದ್ಯೋಗವನ್ನು 90 ಜನ ಮಹಿಳೆಯರಿಗೆ ಮೆ॥ ಶಾಹಿ ಎಕ್ಸ್‌ಪೋರ್ಟ್ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಇಲ್ಲಿ ಕಲ್ಪಿಸಲಾಗಿದೆ.
5. ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೆಟಿ) ಯೋಜನೆಯಡಿ ಸ್ವ ಉದ್ಯೋಗ ತರಬೇತಿ ಸಂಸ್ಥೆಗಳ ಮೂಲಕ ಗ್ರಾಮೀಣ ಬಡತನ ರೇಖೆಗಿಂತ ಕೆಳಗಿನ ನಿರೋದ್ಯೋಗಿ ಯುವಕ/ಯುವತಿಯರೆಗೆ ಟೇಲರಿಂಗ್, ಬ್ಯೂಟಿಪಾರ್ಲರ್, ಗೊಂಬೆ ತಯಾರಿಕೆ, ಆಭರಣಗಳ ತಯಾರಿಕೆ, ದ್ವಿಚಕ್ರ ರಿಪೇರಿ ತರಬೇತಿ ಸಿಸಿ ಕ್ಯಾಮರಾ ತರಬೇತಿ, ಬೋರವೆಲ್ ಮೋಟಾರ್ ತರಬೇತಿ ಮತ್ತು ಕ್ಯಾಂಡಲ್ ಮೇಕಿಂಗ್ ತರಬೇತಿ, ಹಾರ್ಡ್‌ವೇರ್ ನೆಟ್‌ವರ್ಕಿಂಗ್ ಮುಂತಾದ ಯೋಜನೆಗಳ ಬಗ್ಗೆ ತರಬೇತಿ ನೀಡಿ ಸ್ವ ಉದ್ಯೋಗ ಕಲ್ಪಿಸಿಕೊಡಲಾಗಿದೆ.

--3

6. ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)ವು ರಾಜ್ಯದಲ್ಲಿ ಉದ್ಯಮಶೀಲತೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.

- ಒಂದು ದಿನದ ಉದ್ಯಮಶೀಲತಾ ಪ್ರೇರಣಾ ಶಿಬಿರಗಳು
- ಮೂರು ದಿನಗಳ ಉದ್ಯಮಶೀಲತಾ ತಿಳುವಳಿಕಾ ಕಾರ್ಯಕ್ರಮಗಳು
- ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳು
- ಮೂವತ್ತು ದಿನಗಳ ವಲಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ ಕಾಯಕ್ರಮಗಳು

ಈ ಕಾಯಕ್ರಮಗಳಲ್ಲಿ ಪಾಲ್ಗೊಳ್ಳುವ ಆಸಕ್ತ 18 ವರ್ಷ ಮೀರಿದ ನಿರುದ್ಯೋಗ ಯುವಕ/ಯುವತಿಯರನ್ನು ಪತ್ರಿಕಾ ಪ್ರಕಟಣೆ ಹಾಗೂ ಇತರೆ ಉದ್ಯಮಗಳ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.

7. ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ ನೋಂದಾಯಿಸಿ ಕೊಳ್ಳಲಾಗುತ್ತಿದ್ದು, ಅವರ ವಿದ್ಯಾರ್ಹತೆಗೆ ತಕ್ಕಂತೆ ಲಭ್ಯವಿರುವ ಶಿಕ್ಷಣ / ತರಬೇತಿ ಸೌಲಭ್ಯ ಹಾಗೂ ಉದ್ಯೋಗಾವಕಾಶಗಳ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ವೃತ್ತಿ ಸಮಾಲೋಚನೆ ಸೌಲಭ್ಯ ನೀಡಲಾಗುತ್ತಿದೆ.

8. ಸ್ಟಡಿ ಸರ್ಕಲ್: ಸಾರ್ವಜನಿಕ ವಲಯದಲ್ಲಿ ಹೆಚ್ಚಿನ ನೇಮಕಾತಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನಡೆಯುತ್ತಿರುವುದರಿಂದ ಅದರಲ್ಲೂ ಗ್ರಾಮೀಣ ಭಾಗದ ಅಭ್ಯರ್ಥಿಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಕೇಂದ್ರ ಲೋಕಸೇವಾ ಆಯೋಗ, ಕರ್ನಾಟಕ ಲೋಕಸೇವಾ ಆಯೋಗ, ಸಿಬ್ಬಂದಿ ನೇಮಕಾತಿ ಆಯೋಗ, ರೈಲ್ವೆ ಇಲಾಖೆ, ರಕ್ಷಣಾ ಪಡೆ ಮತ್ತು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಎಲ್ಲಾ ವರ್ಗದ (ಗ್ರೂಪ್-ಎ, ಬಿ & ಸಿ) ನೇಮಕಾತಿಗಾಗಿ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಗಳನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಸ್ಟಡಿ ಸರ್ಕಲ್ ಕಾರ್ಯಕ್ರಮದಡಿ ಸಂಬಂಧಿತ ಸ್ಪರ್ಧಾತ್ಮಕ ಪರೀಕ್ಷೆಗಳ ಪಠ್ಯಕ್ರಮ ಆಧಾರ ನುರಿತ ಸಂಪನ್ಮೂಲ ವ್ಯಕ್ತಿಗಳ ಉಪನ್ಯಾಸದ ಮೂಲಕ ತರಬೇತಿ ಒದಗಿಸಲಾಗುತ್ತಿದೆ.

9. ಉದ್ಯೋಗ ಮೇಳ: ಉದ್ಯೋಗಾಕಾಂಕ್ಷಿಗಳು ಮತ್ತು ನಿಯೋಜಕರನ್ನು ಒಂದೇ ವೇದಿಕೆಯಡಿ ತರಲು ನೇರ ಸಂದರ್ಶನ, ಅಧಿಸೂಚಿತ ಹುದ್ದೆಗಳಿಗೆ ಪುರಸ್ಕರಣೆ ಹಾಗೂ ಉದ್ಯೋಗ ಮೇಳಗಳನ್ನು ಪ್ರತಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳ ಮೂಲಕ ಆಯೋಜಿಸಲಾಗುತ್ತಿದ್ದು, ಉದ್ಯೋಗಾಕಾಂಕ್ಷಿಗಳು ಅವರವರ ಶೈಕ್ಷಣಿಕ ಅರ್ಹತೆ ಅನುಸಾರ ಖಾಸಗಿ ಕ್ಷೇತ್ರದ ಉದ್ಯೋಗದಾತರನ್ನು ಸಂಪರ್ಕಿಸಿ ಉದ್ಯೋಗ ಪಡೆದುಕೊಳ್ಳುವ ಅವಕಾಶವನ್ನು ಉದ್ಯೋಗ ಮೇಳಗಳ ಮೂಲಕ ಕಲ್ಪಿಸಲಾಗುತ್ತಿದೆ. ಇದರಿಂದ ಉದ್ಯೋಗಾವಕಾಶಗಳ ಲಭ್ಯತೆ ಮತ್ತು ಅಗತ್ಯ ಮಾನವ ಸಂಪನ್ಮೂಲಗಳ ನೇಮಕಕ್ಕೆ ಅವಕಾಶ ನೀಡಲಾಗುತ್ತಿದೆ.

--4

| | | |
|---|---|---|
| ಆ) | ನಿರುದ್ಯೋಗಿ ಪದವೀಧರರು ಯಾವುದಾದರೂ ಉದ್ಯೋಗದಲ್ಲಿ ನಿರತರಾಗುವವರೆಗೆ ಅವರುಗಳಿಗೆ ಸರ್ಕಾರ ನಿರುದ್ಯೋಗ ಭತ್ಯೆಯನ್ನು ನೀಡಲು ಯಾವ ಕ್ರಮ ಕೈಗೊಳ್ಳಲಾಗುವುದು. | 2023ನೇ ಸಾಲಿನಲ್ಲಿ ತೇರ್ಗಡೆಯಾದ ಪದವೀಧರ ನಿರುದ್ಯೋಗಿಗಳಿಗೆ ತೇರ್ಗಡೆಯಾದ ನಂತರ 6 ತಿಂಗಳು ಕಳೆದರೂ ಉದ್ಯೋಗ ಲಭಿಸದ ನಿರುದ್ಯೋಗಿಗಳಿಗೆ (ವೃತ್ತಿಪರ ಕೋರ್ಸ್‌ಗಳು ಸೇರಿದಂತೆ) ಪ್ರತಿ ತಿಂಗಳು ರೂ.3000/- ರಂತೆ ಉದ್ಯೋಗ ಸಿಗುವವರೆಗೆ ಅಥವಾ ಗರಿಷ್ಠ 2 ವರ್ಷಗಳ ಅವಧಿಗೆ ನಿರುದ್ಯೋಗ ಭತ್ಯೆಯನ್ನು ನೀಡಲು ಯುವನಿಧಿ ಯೋಜನೆಯನ್ನು ಘೋಷಿಸಿರುತ್ತದೆ. |

**ಸಂಖ್ಯೆ: ಕೌಉಜೀಇ 56 ಕೈತಪ್ರ 2023**

**(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.